# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1046 (1249) |
| ಸದಸ್ಯರ ಹೆಸರು | ಶ್ರೀ ಬಸನಗೌಡ ಬಾದರ್ಲಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 17-12-2025 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕು ಸುಮಾರು 2,40,000 ಮತದಾರರು ಹಾಗೂ ಅಂದಾಜು 3 ಲಕ್ಷಕ್ಕಿಂತ ಹೆಚ್ಚು ಜನಸಂಖ್ಯೆಯನ್ನು ಹೊಂದಿದ್ದು ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಮುಂದುವರೆಯುತ್ತಿದ್ದು, ರಾಯಚೂರು ಜಿಲ್ಲಾ ಕೇಂದ್ರದಿಂದ ಸುಮಾರು 90. ಕಿ.ಮೀ., ದೂರದಲ್ಲಿದ್ದು, ಜನರು ಜಿಲ್ಲಾ ಕೇಂದ್ರಕ್ಕೆ ಅಲೆದಾಡುವುದು ಕಷ್ಟಕರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಮಾನ್ವಿ, ಲಿಂಗಸಗೂರು ಹಾಗೂ ಮಸ್ಕಿ ತಾಲ್ಲೂಕು ಕೇಂದ್ರಗಳು ಸಿಂಧನೂರು ತಾಲ್ಲೂಕು ಕೇಂದ್ರದಿಂದ ಕೇವಲ 50 ಕಿ.ಮೀ., ದೂರದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | |
| ಇ) | ಹಾಗಿದ್ದಲ್ಲಿ, ಮಾನ್ವಿ, ಲಿಂಗಸಗೂರು, ಮಸ್ಕಿ ತಾಲ್ಲೂಕುಗಳನ್ನು ಒಳಗೊಂಡಂತೆ ಸಿಂಧನೂರು ತಾಲ್ಲೂಕು ಕೇಂದ್ರವನ್ನು ಜಿಲ್ಲಾ ಕೇಂದ್ರವನ್ನಾಗಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ ಯಾವ ಹಂತದಲ್ಲಿ ಮಾಹಿತಿಯನ್ನು ಒದಗಿಸುವುದು? | ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕನ್ನು ನೂತನ ಜಿಲ್ಲಾ ಕೇಂದ್ರವನ್ನಾಗಿ ಸೃಜಿಸುವ ಸಂಬಂಧದ ಕೋರಿಕೆಗಳು ಸ್ವೀಕೃತವಾಗಿರುತ್ತವೆ. ಸದರಿ ಕೋರಿಕೆಗಳನ್ನು ಪರಿಗಣಿಸಲು ಸೂಕ್ತವಾಗಿದ್ದಲ್ಲಿ ಸರ್ಕಾರಕ್ಕೆ ವಿವರವಾದ ಪ್ರಸ್ತಾವನೆ ಸಲ್ಲಿಸುವಂತೆ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ ಇವರಿಗೆ ಪತ್ರ ಬರೆಯಲಾಗಿದ್ದು, ಸದರಿಯವರಿಂದ ಯಾವುದೇ ವರದಿ/ ಪ್ರಸ್ತಾವನೆ ಸ್ವೀಕೃತಗೊಂಡಿರುವುದಿಲ್ಲ. |

**ಸಂಖ್ಯೆ: ಕಂಇ 63 ಎಲ್‌ಆರ್‌ಡಿ 2025**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು